RNU AIR DHARWAD

# JUNE 12, 2025
# ALL INDIA RADIO- DHARWAD
# PRADESH SAMACHARA (KANNADA) 7:05 AM

- **2030 ರ ವೇಳೆಗೆ, ರಾಜ್ಯದಲ್ಲಿ** 60 ಸಾವಿರ ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆ ಗುರಿ–ಮುಖ್ಯಮಂತ್ರಿ.
- **ಆಡಳಿತ ವೈಫಲ್ಯ ಆರೋಪ:** ಮುಖ್ಯಮಂತ್ರಿ ರಾಜೀನಾಮೆಗೆ ಬಿಜೆಪಿ ಆಗ್ರಹ.
- **ಇಂದು ವಿಶ್ವ ಬಾಲ** ಕಾರ್ಮಿಕ ಪದ್ಧತಿ ವಿರೋಧಿ ದಿನ: ಬಳ್ಳಾರಿ ಜಿಲ್ಲೆಯಲ್ಲಿ89ಬಾಲ ಕಾರ್ಮಿಕ ಮಕ್ಕಳ ರಕ್ಷಣೆ.
- **ವಿಕಸಿತ ಕೃಷಿ ಸಂಕಲ್ಪ ಅಭಿಯಾನ:** ಕೃಷಿ ಕ್ಷೇತ್ರದ ನವೀನ ತಂತ್ರಜ್ಞಾನ ಕುರಿತು ರೈತರಿಗೆ ಮಾಹಿತಿ.

**ಈಗ ವಾರ್ತೆಗಳ ವಿವರ**

*******

**ಪ್ರಧಾನಮಂತ್ರಿ ಕುಸುಮ್** ಸಿ ಯೋಜನೆಯಡಿ ರಾಜ್ಯದಲ್ಲಿ 2400 ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆ ಮಾಡುವ ಗುರಿ ಹೊಂದಿದ್ದು, ಸದ್ಯ 200 ಮೆಗಾವ್ಯಾಟ್ ವಿದ್ಯುತ್ ವಿದ್ಯುತ್ ಉತ್ಪಾದನೆಯಾಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಚಿಕ್ಕಬಳ್ಳಾಪುರ ಜಿಲ್ಲೆ ಗೌರಿಬಿದನೂರು ತಾಲ್ಲೂಕು ತೊಂಡೇಬಾವಿ ಗ್ರಾಮದಲ್ಲಿ ನಿನ್ನೆ ಪ್ರಧಾನ ಮಂತ್ರಿ ಕುಸುಮ್ ಸಿ ಯೋಜನೆಗೆ ಚಾಲನೆ ನೀಡಿ ಮಾತನಾಡಿದ ಅವರು, ಕುಸುಮ್ ಸಿ ಯೋಜನೆಯಡಿ ರೈತರ ಕೃಷಿ ಪಂಪ್ ಸೆಟ್‌ಗಳಿಗೆ ಹಗಲು ತ್ರಿ ಫೇಸ್ ನಲ್ಲಿ 7 ಗಂಟೆ ವಿದ್ಯುತ್ ನೀಡಲಾಗುವುದು ಎಂದರು.

ಪ್ರಸ್ತುತ ರಾಜ್ಯದಲ್ಲಿ 35 ಸಾವಿರ ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆಯಾಗುತ್ತಿದ್ದು, 2030 ರ ವೇಳೆಗೆ 60 ಸಾವಿರ ಮೆಗಾವ್ಯಾಟ್ ಉತ್ಪಾದನೆ ಮಾಡುವ ಗುರಿ ಹೊಂದಲಾಗಿದೆ ಎಂದು ಮುಖ್ಯಮಂತ್ರಿ ತಿಳಿಸಿದರು.

*******

**ಸಾಮಾಜಿಕ ಮತ್ತು ಶೈಕ್ಷಣಿಕ** ಮರು ಸಮೀಕ್ಷೆ ಪಕ್ಷದ ಹೈಕಮಾಂಡ್ ತೀರ್ಮಾನ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ. ಚಿಕ್ಕಬಳ್ಳಾಪುರ ಜಿಲ್ಲೆ ಗೌರಿಬಿದನೂರು ತಾಲ್ಲೂಕು ಅಲಕಾಪುರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 2015 ರಲ್ಲಿ ಜಾತಿಗಣತಿ ನಡೆದಿತ್ತು. ಅದು ನಡೆದು ಈಗ 10 ವ ್ಗಳಾಗಿದೆ. ಅದಕ್ಕಾಗಿಯೇ ಮರುಸಮೀಕ್ಷೆ ನಡೆಸುವಂತೆ ನಿರ್ದೇಶನ ನೀಡಿದ್ದೇನೆ. ಸರ್ಕಾರಕ್ಕೆ ಈಗಾಗಲೇ ಸಲ್ಲಿಕೆಯಾಗಿರುವ ಕಾಂತರಾಜು ವರದಿಯನ್ನು ಪೂರ್ಣವಾಗಿ ಕಡೆಗಣಿಸಿಲ್ಲ. ಕೆಲವು ಬದಲಾವಣೆಗಳೊಂದಿಗೆ 60 –70 ದಿನಗಳಲ್ಲಿ ಮರು ಸಮೀಕ್ಷೆ ನಡೆಸಲಾಗುವುದು ಎಂದು ಮುಖ್ಯಮಂತ್ರಿ ಹೇಳಿದರು.

*******

**ಯಾದಗಿರಿ ಜಿಲ್ಲೆಯ** ಗ್ರಾಮೀಣ ಪ್ರದೇಶಗಳಲ್ಲಿ ಸಮರ್ಪಕ ಕುಡಿಯುವ ನೀರು ಪೂರೈಕೆಗೆ ಕ್ರಮ ಕೈಗೊಳ್ಳುವಂತೆ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ಸೂಚಿಸಿದ್ದಾರೆ. ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ, ಜಿಲ್ಲೆಯ ಕುಡಿಯುವ ನೀರಿನ ಸ್ಥಿತಿಗತಿ ಕುರಿತ ಪರಿಶೀಲನಾ ಸಭೆಯಲ್ಲಿ ಈ ಸೂಚನೆ ನೀಡಿದ ಅವರು, ಬಾಡಿಗೆ ಕೊಳವೆಬಾವಿಗಳ ಮೂಲಕ ನೀರು ಪೂರೈಸುತ್ತಿರುವ ಗ್ರಾಮಗಳಿಗೆ ಸ್ವಚ್ಛ, ಶುದ್ಧ ನೀರು ಒದಗಿಸಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

*******

**ಹೇಮಾವತಿ ನೀರನ್ನು** ರಾಮನಗರಕ್ಕೆ ಹರಿಸುವ ಮೊದಲು ಜಿಲ್ಲೆಗೆ ನಿಗದಿಯಾಗಿರುವ ನೀರಿನ ಪ್ರಮಾಣವನ್ನು ಹೆಚ್ಚಿಸಲಿ ಎಂದು ಕೇಂದ್ರ ಜಲಶಕ್ತಿ ಮತ್ತು ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಹೇಳಿದ್ದಾರೆ. ತುಮಕೂರು ಜಿಲ್ಲೆ ಗುಬ್ಬಿ ತಾಲ್ಲೂಕಿನ ಡಿ.ರಾಂಪುರ ಬಳಿ ನಡೆಯುತ್ತಿರುವ ಲಿಂಕ್ ಕೆನಾಲ್ ಎಕ್ಸ್ ಪ್ರೆಸ್ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಮಾತನಾಡಿದ ಅವರು, ರಾಜ್ಯ ಸರ್ಕಾರ ರಾಮನಗರಕ್ಕೆ ನೀರು ಕೊಂಡೊಯ್ಯುವುದಕ್ಕೆ ಯಾರ ವಿರೋಧವೂ ಇಲ್ಲ, ಆದರೆ ಜಿಲ್ಲೆಗೆ ನಿಗದಿಯಾಗಿರುವ ನೀರಿನ ಪ್ರಮಾಣವನ್ನು ಹೆಚ್ಚಿಸುವುದರೊಂದಿಗೆ ಅಕ್ಕ ಪಕ್ಕದ ಕೆರೆಗಳಿಗೂ ನೀರು ಹರಿಸುವಂತೆ ಯೋಜನೆ ರೂಪಿಸಿದರೆ ಕೇಂದ್ರ ಸರ್ಕಾರದಿಂದಲೂ ಅನುದಾನ ಕೊಡಿಸಲಾಗುವುದು ಎಂದ ಅವರು, ಅಲ್ಲಿಯವರೆಗೆ ಕಾಮಗಾರಿ ಸ್ಥಗಿತಗೊಳಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

*******

**ಕೇಂದ್ರ ಸರ್ಕಾರ ಜಾರಿಗೊಳಿಸಿರುವ** ಯೋಜನೆಗಳು ಬೆಳಗಾವಿ–ಧಾರವಾಡ ಮತ್ತು ಹುಬ್ಬಳ್ಳಿ ನಗರಗಳ ಪರಸ್ಪರ ಅಭಿವೃದ್ಧಿಗೆ ಪೂರಕವಾಗಿವೆ ಎಂದು ವಿಧಾನಸಭೆ ವಿರೋಧ ಪಕ್ಷದ ಉಪ ನಾಯಕ ಅರವಿಂದ ಬೆಲ್ಲದ ಹೇಳಿದ್ದಾರೆ. ಬೆಳಗಾವಿಯಲ್ಲಿ ನಿನ್ನೆ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರೈಲ್ವೆ ಇಲಾಖೆಯ ಕಾಮಗಾರಿಗಳು, ವಂದೆ ಭಾರತ ರೈಲು ಸಂಚಾರ, ಬೆಳಗಾವಿ ಮತ್ತು ಹುಬ್ಬಳ್ಳಿಯ ನಿಲ್ದಾಣಗಳನ್ನು ಮೇಲ್ದರ್ಜೆಗೇರಿಸಿದ್ದು, ಮಹಾರಾಷ್ಟ್ರ ಮತ್ತು ಕರ್ನಾಟಕ ಅಂತರಾಜ್ಯ ಕೈಗಾರಿಕೆ ಉದ್ಯಮ ಸ್ಥಾಪನೆ, ಕಿತ್ತೂರು ಸಮೀಪದ ಕಾರಿಡಾರ್ ರಚನೆಯ ಉದ್ದೇಶ ಇವೆಲ್ಲ ಸಮಗ್ರ ಉತ್ತರ ಕರ್ನಾಟಕದ ಅಭಿವೃದ್ಧಿಯ ದೂರದೃಷ್ಟಿ ಹೊಂದಿವೆ ಎಂದು ತಿಳಿಸಿದರು.

*******

**ಜಾತಿ ಗಣತಿ ಮರು ಸಮೀಕ್ಷೆ, ಬೆಂಗಳೂರಿನ ಚಿನ್ನಸ್ವಾಮಿ** ಕ್ರೀಡಾಂಗಣದ ಬಳಿ ಸಂಭವಿಸಿದ ಕಾಲ್ತುಳಿತ ಸೇರಿದಂತೆ, ರಾಜ್ಯದಲ್ಲಿ ಸಂಭವಿಸಿದ ಸರಣಿ ಆಡಳಿತ ವೈಫಲ್ಯ ಹಿನ್ನೆಲೆಯಲ್ಲಿ, ನೈತಿಕ ಹೊಣೆ ಹೊತ್ತು ಕೂಡಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಬಿಜೆಪಿ ಒತ್ತಾಯಿಸಿದೆ. ಬೆಂಗಳೂರಿನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಶಾಸಕ ಸುನೀಲ್‌ಕುಮಾರ್, ಸುಮಾರು 165 ಕೋಟಿ ವೆಚ್ಚ ಮಾಡಿ ತಯಾರಿಸಿದ ಜಾತಿ ಗಣತಿ ವರದಿಯನ್ನು, ಈಗ ದತ್ತಾಂಶ ಸರಿಯಿಲ್ಲ ಎಂದು ಕೈಬಿಟ್ಟು ಮರು ಸಮೀಕ್ಷೆಗೆ ನಿರ್ಧರಿಸುವ ಮೂಲಕ ಜನರ ತೆರಿಗೆ ಹಣವನ್ನು ವ್ಯರ್ಥ ಮಾಡಲಾಗಿದೆ. ಇದಕ್ಕೆ ಯಾರನ್ನು ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಪ್ರಶ್ನಿಸಿದರು. ಕೇಂದ್ರ ಸರ್ಕಾರ ಜನಗಣತಿಯೊಂದಿಗೆ, ಜಾತಿ ಸಮೀಕ್ಷೆ ನಡೆಸುವುದಾಗಿ ಘೋಷಿಸಿದ್ದು, ರಾಜ್ಯ ಸರ್ಕಾರ ಮರು ಜಾತಿ ಸಮೀಕ್ಷೆಗೆ ಮುಂದಾಗದೇ, ಕೇಂದ್ರ ಸರ್ಕಾರಕ್ಕೆ ಸಹಕಾರ ನೀಡಬೇಕು ಎಂದು ಅವರು ಒತ್ತಾಯಿಸಿದರು.

*******

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ**

*******

**ಇಂದು ವಿಶ್ವ ಬಾಲ ಕಾರ್ಮಿಕ** ಪದ್ಧತಿ ವಿರೋಧಿ ದಿನ. ಹಲವು ವಿಧಾಯಕ ಕಾರ್ಯಕ್ರಮಗಳ ಮೂಲಕ ಇಂದು ಜನರಲ್ಲಿ ಈ ಪದ್ಧತಿ ಕುರಿತು ಜಾಗೃತಿ ಮೂಡಿಸುವ ಪ್ರಯತ್ನ ಮಾಡಲಾಗುತ್ತದೆ. **ಬಳ್ಳಾರಿ ಜಿಲ್ಲೆಯಲ್ಲಿ ಕಳೆದ** ಮೂರು ವರ್ಷಗಳಲ್ಲಿ14 ರಿಂದ 18 ವರ್ಷದೊಳಗಿನ 89ಬಾಲ ಕಾರ್ಮಿಕ ಮಕ್ಕಳನ್ನು ರಕ್ಷಿಸಲಾಗಿದ್ದು, ಅವರನ್ನು ಮುಖ್ಯವಾಹಿನಿಗೆ ತರುವ ಪ್ರಯತ್ನ ಮಾಡಲಾಗಿದೆ. ಈ ಕುರಿತು ಜಿಲ್ಲೆಯ ಬಾಲ ಕಾರ್ಮಿಕಯೋಜನಾ ನಿರ್ದೇಶಕ ಮೌನೇಶ ಅವರು, ಇಲಾಖೆ ಕೈಗೊಂಡ ಕ್ರಮಗಳ ಕುರಿತು ಆಕಾಶವಾಣಿಗೆ ಹೆಚ್ಚಿನ ಮಾಹಿತಿ ನೀಡಿದ್ದಾರೆ.

**ಧ್ವನಿ– ಮೌನೇಶ–50 ಸೆಕೆಂಡ್ಸ್**

*******

**ಬೆಂಗಳೂರಿನ ಐಸಿಎಆರ್ ಕೃಷಿ** ತಂತ್ರಜ್ಞಾನ ಸಂಶೋಧನಾ ಸಂಸ್ಥೆ ಮತ್ತು ಕೃಷಿ ವಿಜ್ಞಾನ ಕೇಂದ್ರದ ಆಶ್ರಯದಲ್ಲಿ ಕೋಲಾರದಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಜರುಗಿತು. ಅಭಿಯಾನದಲ್ಲಿ ವಿಜ್ಞಾನಿಗಳು ಹಾಗೂ ಪ್ರಗತಿಪರ ರೈತರು ಭಾಗಿಯಾಗಿದ್ದರು. ರೈತರೊಂದಿಗೆ ಸಂವಾದ, ನೈಸರ್ಗಿಕ ಕೃಷಿ ಕುರಿತು ಅಭಿಯಾನದಲ್ಲಿ ಪ್ರಾತ್ಯಕ್ಷಿತೆ ನೀಡಲಾಯಿತು.

*******

**ಬಳ್ಳಾರಿಯ ಹಗರಿ ಕೃಷಿ** ವಿಜ್ಞಾನ ಕೇಂದ್ರ ಹಾಗೂ ಕೃಷಿ ಇಲಾಖೆಗಳ ಸಹಯೋಗದಲ್ಲಿ ಕೂಡ್ಲಿಗಿ ತಾಲೂಕಿನ ಕಕ್ಕುಪ್ಪಿ, ಮೊರಬ ಹಾಗೂ ಶಿವಪುರ ಗ್ರಾಮಗಳಲ್ಲಿ ವಿಕಸಿತ ಕೃಷಿ ಅಭಿಯಾನ ಜರುಗಿತು. ಹಗರಿ ಕೃಷಿ ವಿಜ್ಞಾನ ಕೇಂದ್ರದ ಹಿರಿಯ ವಿಜ್ಞಾನಿ ಡಾಕ್ಟರ್ ಬಾಲಯ್ಯ ಪಿ. ವಿಕಸಿತ ಕೃಷಿ ಸಂಕಲ್ಪ ಅಭಿಯಾನದ ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸಿ ಕೃಷಿ ಕ್ಷೇತ್ರದಲ್ಲಿನ ನವೀನ ತಂತ್ರಜ್ಞಾನಗಳ ಬಗ್ಗೆ ಮಾಹಿತಿ ನೀಡಿದರು.

*******

**ಗದಗ ಜಿಲ್ಲೆಯ ಹಳ್ಳಿಕೇರಿ,** ಹಳ್ಳಿಗುಡಿ, ಕಕ್ಕೂರ, ವೆಂಕಟಾಪೂರ, ಸೂಡಿ ಮತ್ತು ಜಾಲವಾಡಗಿ ಗ್ರಾಮಗಳಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಯಶಸ್ವಿಯಾಗಿ ಜರುಗಿತು. ಗದಗ ಜಿಲ್ಲೆಯ ಹುಲಕೋಟಿಯ ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳಾದ ಡಾ ಸುಧಾ ಮಂಕಣಿ, ಡಾ.ವಿನಾಯಕ ನಿರಂಜನ, ಡಾ.ಕೆ.ವಿ ಪಾಟೀಲ, ಕೃಷಿ ಅಧಿಕಾರಿಗಳು ಅಭಿಯಾನದಲ್ಲಿ ಪಾಲ್ಗೊಂಡು, ರೈತರಿಗೆ ಮುಂಗಾರು ಹಂಗಾಮಿನಲ್ಲಿ ಕೈಗೊಳ್ಳುವ ಬೆಳೆಗಳ ಬಿತ್ತನೆ, ಮಣ್ಣು ಪರೀಕ್ಷೆ, ಸಮಗ್ರ ಪೋಷಕಾಂಶ ಒದಗಿಸುವ ವಿಧಾನ ಮತ್ತು ಕೀಟ ನಿರ್ವಹಣೆ ಕುರಿತು ಮಾಹಿತಿ ನೀಡಿದರು.

*******

**ಕೇಂದ್ರ ಸರ್ಕಾರದ** ಕೃಷಿ ಮಂತ್ರಾಲಯದ ಮಹತ್ವದ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಬೆಂಗಳೂರು ಗ್ರಾಮಾಂತರ ಜಿಲ್ಲಾ ಕೃಷಿ ವಿಜ್ಞಾನ ಕೇಂದ್ರದ ವತಿಯಿಂದ ಜಿಲ್ಲೆಯ ಹೊಸಕೋಟೆ ತಾಲ್ಲೂಕಿನ ನಂದಗುಡಿ, ಜಡಿಗೇನಹಳ್ಳಿ ಗ್ರಾಮಗಳಲ್ಲಿ ನಡೆಯಿತು.

*******

**ರಾಜ್ಯದ ಹಲವೆಡೆ** ನಿನ್ನೆ ಭಾರಿ ಮಳೆಯಾಗಿದ್ದು, ಕೆಲವೆಡೆ ಜನಜೀವನ ಅಸ್ತವ್ಯಸ್ತಗೊಂಡಿದೆ. ಕಳೆದ ರಾತ್ರಿ ಹುಬ್ಬಳ್ಳಿಯಲ್ಲಿ ಗುಡುಗು ಸಹಿತ ಭಾರಿ ಮಳೆಯಾಗಿದ್ದು, ಜನಜೀವನ ಅಸ್ತವ್ಯಸ್ತಗೊಂಡಿತ್ತು. ನಗರದ ಬಹುತೇಕ ರಸ್ತೆಗಳು ಜಲಾವೃತಗೊಂಡರೆ, ಕೆಲವು ಅಪಾರ್ಟಮೆಂಟಗಳಿಗೆ ನೀರು ನುಗ್ಗಿತ್ತು. ಜಿಲ್ಲೆಯ ನವಲಗುಂದ ತಾಲೂಕಿನಲ್ಲೂ ಭಾರಿ ಮಳೆಯಾಗಿದ್ದು, ಗುಡಿಸಾಗರ ಹತ್ತಿರದ ಹಳ್ಳ ತುಂಬಿ ಹರಿಯುತ್ತಿದೆ. ಪ್ರವಾಹದಿಂದ ಪಡೆಸೂರ, ಶಾನವಾಡ, ನಾಗನೂರ ಅರಹಟ್ಟಿ, ಕಡದಳ್ಳಿ, ತಡಹಾಳ ರಸ್ತೆ ಸಂಚಾರ ಸ್ಥಗಿತಗೊಂಡಿದೆ. ಜಿಲ್ಲೆಗೆ ಇಂದು ರೆಡ್ ಅಲರ್ಟ ಘೋಷಿಸಲಾಗಿದೆ. **ಬೆಂಗಳೂರು,** ದಕ್ಷಿಣ ಕನ್ನಡ ಉಡುಪಿ, ಉತ್ತರ ಕನ್ನಡ ಜಿಲ್ಲೆಯಲ್ಲಿ ಒಂದು ಅಥವಾ ಎರಡು ಸ್ಥಳಗಳಲ್ಲಿ ಗುಡುಗು ಸಹಿತ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಉತ್ತರ ಕನ್ನಡ ಜಿಲ್ಲೆಯಲ್ಲಿ ಇಂದಿನಿಂದ ಇದೇ 14 ರವರೆಗೆ ಮೂರು ದಿನಗಳ ರೆಡ್ ಅಲರ್ಟ್ ಇದ್ದು, ಗುಡುಗು ಸಿಡಿಲಿನೊಂದಿಗೆ ಕೆಲವು ಪ್ರದೇಶಗಳಲ್ಲಿ ಹೆಚ್ಚಿನ ಗಾಳಿಯಿಂದ ಕೂಡಿದ ಮಳೆಯಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಅಗತ್ಯ ಮುನ್ನೆಚ್ಚರಿಕೆ ವಹಿಸುವಂತೆ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯ ತಿಳಿಸಿದ್ದಾರೆ.

*******

**ಧಾರವಾಡದ ಕೃಷಿ ವಿಜ್ಞಾನಗಳ** ವಿಶ್ವ ವಿದ್ಯಾಲಯಕ್ಕೆ ಹೊಸ ದಿಲ್ಲಿಯ ರಾಷ್ಟ್ರೀಯ ಕೃಷಿ ಶಿಕ್ಷಣ ಮಾನ್ಯತಾ ಮಂಡಳಿ, ಮುಂದಿನ ಐದು ವರ್ಷಗಳಿಗೆ ಅನ್ವಯವಾಗುವಂತೆ 'ಎ' ಶ್ರೇಣಿ ನೀಡಿ ಆದೇಶಿಸಿದೆ ಎಂದು ಉಪ ಕುಲಪತಿ ಡಾ.ಪಿ.ಎಲ್.ಪಾಟೀಲ ತಿಳಿಸಿದ್ದಾರೆ.

*******

**ತುಮಕೂರು ಜಿಲ್ಲೆಯ 10** ತಾಲ್ಲೂಕುಗಳ ತಹಶೀಲ್ದಾರ್ ಕಚೇರಿ ಕಾರ್ಯಾಲಯಗಳ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಲೋಕಾಯುಕ್ತ ಎಸ್ಪಿ ಲಕ್ಷ್ಮೀನಾರಾಯಣ್ ನೇತೃತ್ವದಲ್ಲಿ ತುಮಕೂರು ಜಿಲ್ಲೆಯ ಕೊರಟಗೆರೆ, ಮಧುಗಿರಿ, ಪಾವಗಡ, ಶಿರಾ, ಗುಬ್ಬಿ, ತಿಪಟೂರು, ತುರುವೇಗೆರೆ, ಚಿಕ್ಕನಾಯಕನಹಳ್ಳಿ, ಕುಣಿಗಲ್ ಕಚೇರಿಗಳ ಮೇಲೆ ಏಕಕಾಲಕ್ಕೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿ, ದಾಖಲೆಗಳ ಪರಿಶೀಲನೆ ಮಾಡಿದ್ದಾರೆ.

*******

## ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

**2030 ರ ವೇಳೆಗೆ, ರಾಜ್ಯದಲ್ಲಿ** 60 ಸಾವಿರ ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆ ಗುರಿ–ಮುಖ್ಯಮಂತ್ರಿ.

**ಆಡಳಿತ ವೈಫಲ್ಯ ಆರೋಪ:** ಮುಖ್ಯಮಂತ್ರಿ ರಾಜೀನಾಮೆಗೆ ಬಿಜೆಪಿ ಆಗ್ರಹ.

**ಇಂದು ವಿಶ್ವ ಬಾಲ** ಕಾರ್ಮಿಕ ಪದ್ಧತಿ ವಿರೋಧಿ ದಿನ: ಬಳ್ಳಾರಿ ಜಿಲ್ಲೆಯಲ್ಲಿ89ಬಾಲ ಕಾರ್ಮಿಕ ಮಕ್ಕಳ ರಕ್ಷಣೆ.

**ವಿಕಸಿತ ಕೃಷಿ ಸಂಕಲ್ಪ ಅಭಿಯಾನ:** ಕೃಷಿ ಕ್ಷೇತ್ರದ ನವೀನ ತಂತ್ರಜ್ಞಾನ ಕುರಿತು ರೈತರಿಗೆ ಮಾಹಿತಿ.

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ**

****END****